# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟ್‌ಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 10 /2022-23 ದಿನಾಂಕ: 01-10-2022

**ದಿನಾಂಕ- 01-10-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಸಮಿತಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ನೇತಾಜಿ ರಸ್ತೆಯ ಬದಿಯಲ್ಲಿ ಸಾರ್ವಜನಿಕರು ಹಾಕಿರುವ ಕಸವನ್ನು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.
2. ನೇತಾಜಿ ರಸ್ತೆಯ ಬದಿಯಲ್ಲಿ ಪ್ರತಿನಿತ್ಯ ಕಸದ ಆಟೋಗಳನ್ನು ನಿಲ್ಲಿಸುತ್ತಿರುವುದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಸದರಿ ವಾಹನಗಳನ್ನು ರಸ್ತೆ ಬದಿಯಲ್ಲಿ ನಿಲ್ಲಿಸದಂತೆ ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣೆ ಕೋಶದ ಅಧಿಕಾರಿಗಳಿಗೆ ಸೂಚಿಸಲಾಯಿತು.
3. ಅಹಮದ್ ಸೇಟ್ ರಸ್ತೆ, ಸಿಂಧಿ ಕಾಲೋನಿ 2ನೇ ಅಡ್ಡರಸ್ತೆ, ರಾಬರ್ಟ್ ಸನ್ ರಸ್ತೆ, ಮೋರ್ ರಸ್ತೆ, ಸೌಂಡರ್ಸ್ ರಸ್ತೆಗಳ ಚರಂಡಿಗಳಲ್ಲಿ ಹೂಳು ತೆಗೆಯಲು ಸೂಚಿಸಲಾಯಿತು.
4. ವಿಲ್ಲರ್ಸ್ ರಸ್ತೆಯಲ್ಲಿರುವ ಚರಂಡಿಗಳಲ್ಲಿ ಹೂಳು ತೆಗೆಯಲು ಸಂಬಂಧಪಟ್ಟ ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗರವರಿಗೆ ತಿಳಿಸಲಾಯಿತು.
5. ವಾರ್ಡಿನ ಫ್ರೇಜರ್ ಟೌನ್ ರೆಸಿಡೆಟ್ಸ್ ವೆಲ್‌ಫೇರ್ ಅಸೋಷಿಯನ್ಸ್ ರವರು ಮನವಿ ಪತ್ರ ನೀಡಿ ವಾರ್ಡಿನ ಕೆಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಭೆಯಲ್ಲಿ ತಿಳಿಸಿರುತ್ತಾರೆ.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿಗಳು ಕಾರ್ಯದರ್ಶಿ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner